ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

**DTE-ADMI0ACM2/22/2024**

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:14-06-2024.

**-:: ಸು ತ್ತೋಲೆ ::-**

ವಿಷಯ: 2024-25ನೇ ಸಾಲಿನಲ್ಲಿ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶ ಸಂಬಂಧ - ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ ಪ್ರಥಮ ಸೆಮಿಸ್ಟರ್ ಡಿಪ್ಲೋಮಾಗೆ ಪ್ರವೇಶ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ:
1. ಈ ಕಛೇರಿ ಸಮಸಂಖ್ಯೆ ಸುತ್ತೋಲೆ ಪತ್ರ ದಿನಾಂಕ: 07.05.2024, 31.05.2024, 05.06.2024 (ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳು).
2. ಈ ಕಛೇರಿ ಸಮಸಂಖ್ಯೆ ಸುತ್ತೋಲೆ ಪತ್ರ ದಿನಾಂಕ: 07.05.2024, 31.05.2024 (ಖಾಸಗಿ ಪಾಲಿಟೆಕ್ನಿಕ್ ಗಳು).
3. ಹಲವು ಪಾಲಿಟೆಕ್ನಿಕ್ ಪ್ರಾಂಶುಪಾಲರುಗಳ ಮನವಿ.

*********

2024-25ನೇ ಶೈಕ್ಷಣಿಕ ಸಾಲಿನ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶಕ್ಕೆ ಸಂಬಂದಿಸಿದಂತೆ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ ದಿ:15.06.2024ರ ಒಳಗೆ ಪ್ರವೇಶ ಪಡೆಯಲು ಅವಧಿಯನ್ನು ವಿಸ್ತರಿಸಿ ಉಲ್ಲೇಖ(1) & (2)ರಲ್ಲಿ ಅನುಮತಿ ನೀಡಲಾಗಿತ್ತು.

ಆದರೆ, ಸಂಬಂಧಪಟ್ಟ ಉಲ್ಲೇಖ(3)ರಲ್ಲಿನ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರುಗಳು ಪ್ರವೇಶ ಅವಧಿಯನ್ನು ವಿಸ್ತರಿಸಬೇಕೆಂದು ಕೋರಿರುವುದನ್ನು ಪರಿಗಣಿಸಿ ಒಟ್ಟಾರೆ ಸಂಸ್ಥೆಗಳ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯ ಮೇರೆಗೆ ಪ್ರಥಮ ಸೆಮಿಸ್ಟರ್‌ನಲ್ಲಿ ಭರ್ತಿ ಆಗದ ಉಳಿಕೆ ಸೀಟುಗಳಿಗೆ **ಅಂತಿಮ ದಿ:29.06.2024 ರವರೆಗೆ ಪ್ರವೇಶಾವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.**

ಪ್ರಾಂಶುಪಾಲರು ಕೂಡಲೇ ಈ ಬಗ್ಗೆ ಕ್ರಮ ತೆಗೆದುಕೊಂಡು ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡುವುದು. ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳ ಕೋರ್ಸುಗಳಲ್ಲಿ ಭರ್ತಿಯಾಗದೇ ಖಾಲಿ ಉಳಿದಿರುವ ಸೀಟುಗಳನ್ನು ಸಂಸ್ಥೆಯ ಸೂಚನಾಫಲಕದಲ್ಲಿ ಪ್ರಕಟಿಸಿ ವಿದ್ಯಾರ್ಥಿ/ಪೋಷಕರುಗಳ

ಗಮನಕ್ಕೆ ತರಲು ಸೂಚಿಸಿದೆ. ಪ್ರಯುಕ್ತ, ಇದನ್ನು ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.

"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"

ನಿರ್ದೇಶಕರು

ತಾಂತ್ರಿಕ ಶಿಕ್ಷಣ ಇಲಾಖೆ,

ಬೆಂಗಳೂರು

ಗೆ,

| | |
|---|---|
| ರಾಜ್ಯದ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ ಸೂಕ್ತ ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ | - ಸದರಿ ಸುತ್ತೋಲೆಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಿ ನಿಯಮಗಳ ಪ್ರಕಾರ ತಮ್ಮ ಹಂತದಲ್ಲಿಯೇ ದಿ:29-06-2024ರ ಒಳಗೆ ಪ್ರವೇಶ ಪ್ರಕ್ರಿಯೆಯನ್ನು ಪೂರ್ಣಗೊಳಿಸತಕ್ಕದ್ದು. |

ಪ್ರತಿ ಮಾಹಿತಿಗಾಗಿ:-

1) ಆಯುಕ್ತರ ಆಪ್ತಶಾಖೆಗೆ.
2) ನಿರ್ದೇಶಕರ ಆಪ್ತಶಾಖೆಗೆ.
3) ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ಆಯುಕ್ತಾಲಯ, ಬೆಂಗಳೂರು.
4) ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು,
5) ಡಿವಿಪಿ(1) ಮತ್ತು ಡಿವಿಪಿ(2) ವಿಭಾಗಕ್ಕೆ.
6) ಇ.ಆರ್.ಎಸ್ ವಿಭಾಗಕ್ಕೆ - ಸಿ.ಬಿ.ಎಸ್.ಇ, ಐ.ಸಿ.ಎಸ್.ಇ ಹಾಗೂ ಕರ್ನಾಟಕೇತರ ಅಭ್ಯರ್ಥಿಗಳಿಗೆ ಅರ್ಹತಾ ಪ್ರಮಾಣ ಪತ್ರ ವಿತರಿಸುವ ಬಗ್ಗೆ ಇ-ಮಾಹಿತಿ ಪುಸ್ತಕದಲ್ಲಿ ತಿಳಿಸಿರುವಂತೆ ಕ್ರಮಜರುಗಿಸತಕ್ಕದ್ದು.
7) ಇ-ಆಡಳಿತ ವಿಭಾಗಕ್ಕೆ - ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
8) ಕಡತಕ್ಕೆ.